ಮನುಷ್ಯನು ತನ್ನ ಸ್ವಾರ್ಥಕ್ಕಾಗಿ ಕಾಡನ್ನು ನಾಶ ಮಾಡುತ್ತಿದ್ದಾನೆ. ಕಾಡಿನ ಪ್ರಮಾಣ ಕಡಿಮೆಯಾದಂತೆ ಕಾಡಿನಲ್ಲಿ ವಾಸಿಸುವ ಪ್ರಾಣಿಗಳ ಸಂಖ್ಯೆಯೂ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದೆ. ಪ್ರಾಣಿಗಳಿಗೆ ಹಿಂಸೆ ಕೊಡುವುದು ಅಪರಾಧ. ಇಂತಹ ರೋಬೋಟ್ ಆನೆಗಳನ್ನು ಧಾರ್ಮಿಕ ಕಾರ್ಯಗಳಿಗೆ ಬಳಸಿಕೊಳ್ಳುವುದು ಉತ್ತಮ ನಿರ್ಧಾರವಾಗಿದೆ

• **ಬಸವರಾಜ ವಿ. ಶಿವಗಂಗಾ** ಶಾಸಕ, ಚನ್ನಗಿರಿ ಕ್ಷೇತ್ರ

50 ವರ್ಷಗಳ ಆನೆ ಬೇಡಿಕೆ ಈಗ ಈಡೇರಿದೆ

ತಾವರೆಕೆರೆಯಲ್ಲಿ ರೋಬೋಟ್ ಆನೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಎಡೆಯೂರು ಶ್ರೀ ಸಂತಸ

• **ಕನ್ನಡಪ್ರಭ ವಾರ್ತೆ** ಚನ್ನಗಿರಿ

ಭಾರತೀಯ ಸಂಸ್ಕೃತಿಯ ಧಾರ್ಮಿಕ ಕಾರ್ಯಗಳಲ್ಲಿ ಆನೆಗಳ ಬಳಸುವ ಪದ್ಧತಿ ಇದೆ. ಅದರಂತೆ ತಾವರೆಕೆರೆ ಶಿಲಾಮಠಕ್ಕೆ 50 ವರ್ಷಗಳ ಹಿಂದೆ ಆನೆಯನ್ನು ತರುವ ಮನವಿಯನ್ನು ಅಂದಿನ ಸರ್ಕಾರಕ್ಕೆ ಮಾಡಿದ್ದೆವು. ಕೆಲವು ಕಾರಣಗಳಿಂದ ಆನೆ ತರಲಾಗಿರಲಿಲ್ಲ. ಪ್ರಸ್ತುತವಾಗಿ ಕ್ಯೂಪ ಅಂಡ್ ಪೆಟಾ ಸಂಸ್ಥೆಯವರು ನಮ್ಮ ಮಠಕ್ಕೆ ರೋಬೋಟ್ ಆನೆಯನ್ನು ದಾನವಾಗಿ ನೀಡಿ, 50 ವರ್ಷಗಳ ಮಠದ ಕನಸು ನನಸಾಗಿಸಿದ್ದಾರೆ ಎಂದು ಎಡೆಯೂರು ಕ್ಷೇತ್ರದ ಶ್ರೀ ರೇಣುಕಾ ಶಿವಾಚಾರ್ಯ ಸ್ವಾಮೀಜಿ ಸಂತಸ ವ್ಯಕ್ತಪಡಿಸಿದರು.

ತಾಲೂಕಿನ ತಾವರೆಕೆರೆ ಗ್ರಾಮದ ಶಿಲಾಮಠ ಆವರಣದಲ್ಲಿ ಕ್ಯೂಪ ಅಂಡ್ ಪೆಟಾ ಸಂಸ್ಥೆಯವರು ಶ್ರೀಮಠಕ್ಕೆದಾನನೀಡಿದಉಮಾಮಹೇಶ್ವರನಾಮಾಂಕಿತ ರೋಬೋಟ್ ಆನೆಯ ಲೋಕಾರ್ಪಣೆ ಕಾರ್ಯಕ್ರಮದದಿವ್ಯಸಾನ್ನಿಧ್ಯವಹಿಸಿಅವರುಮಾತನಾಡಿದರು. ಪ್ರಸ್ತುತ ಕಾಡಿನಲ್ಲಿ ಪ್ರಾಣಿಗಳೇ ಮಾಯವಾಗುತ್ತಿವೆ. ಕಾಡುಪ್ರಾಣಿಗಳನ್ನು ಪಳಗಿಸುವುದು, ಸಾಕುವುದನ್ನು ಸರ್ಕಾರ ನಿಷೇಧಿಸಿದೆ. ಮಠಗಳಲ್ಲಿ ಆನೆಯನ್ನು ಸುರಕ್ಷಿತವಾಗಿ ಸಾಕಲು ಸಾಧ್ಯವಾಗುವುದಿಲ್ಲ. ಇದನ್ನು ಮನಗಂಡ ಕ್ಯೂಪ ಅಂಡ್ ಪೆಟಾ ಸಂಸ್ಥೆಯವರು ರಾಜ್ಯದ 4 ಮಠಗಳಿಗೆ ಇಂತಹ ರೋಬೋಟ್ ಆನೆಗಳನ್ನು ದಾನವಾಗಿ ನೀಡಿದ್ದಾರೆ ಎಂದರು.

ಅಧ್ಯಕ್ಷತೆಯನ್ನು ಕ್ಷೇತ್ರದ ಶಾಸಕ ಬಸವರಾಜ ವಿ. ಶಿವಗಂಗಾಮಾತನಾಡಿ,ಮನುಷ್ಯನುತನ್ನಸ್ವಾರ್ಥಕ್ಕಾಗಿ ಕಾಡನ್ನು ನಾಶ ಮಾಡುತ್ತಿದ್ದಾನೆ. ಕಾಡಿನ ಪ್ರಮಾಣ ಕಡಿಮೆಯಾದಂತೆ ಕಾಡಿನಲ್ಲಿ ವಾಸಿಸುವ ಪ್ರಾಣಿಗಳ ಸಂಖ್ಯೆಯೂ ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದೆ. ಪ್ರಾಣಿಗಳಿಗೆ ಹಿಂಸೆ ಕೊಡುವುದು ಅಪರಾಧ. ಇಂತಹ ರೋಬೋಟ್ ಆನೆಗಳನ್ನು ಧಾರ್ಮಿಕ ಕಾರ್ಯಗಳಿಗೆ ಬಳಸಿಕೊಳ್ಳುವುದು ಉತ್ತಮ ನಿರ್ಧಾರವಾಗಿದೆ. ರೋಬೋಟ್ ಆನೆ ನೈಜ ಆನೆಯನ್ನೇ ಹೋಲುವಂತಿದೆ. ದಾವಣಗೆರೆ ಜಿಲ್ಲೆಯಲ್ಲಿಯೇ ನನ್ನ ಕ್ಷೇತ್ರಕ್ಕೆ ಯಾಂತ್ರೀಕೃತ ಆನೆ ನಮ್ಮ ಮಠಕ್ಕೆ ಬಂದಿರುವುದು ಸಂತಸ ತಂದಿದೆ ಎಂದರು.

ಈ ಗ್ರಾಮದಲ್ಲಿ ಗೋಶಾಲೆ ತೆರೆಯಬೇಕೆನ್ನುವುದು ಶ್ರೀಗಳ ಆಶಯವಾಗಿದೆ. ಅವರ ಸಲಹೆಯಂತೆ ಗ್ರಾಮದ ಸರ್ಕಾರಿ ಜಮೀನನ್ನು ಗುರುತಿಸಿ, ಮುಂದಿನ 15 ದಿನಗಳಲ್ಲಿ ಗೋಶಾಲೆ ಪ್ರಾರಂಭಿಸಲು ಮುಂದಾಗುತ್ತೇನೆ ಎಂದರು. ಮಾಜಿ ಶಾಸಕ ಮಾಡಾಳು ವಿರೂಪಾಕ್ಷಪ್ಪ ಮಾತನಾಡಿ, ನೈಜ ಆನೆ ಹೋಲುವಂತೆ ರೋಬೋಟ್ ಆನೆಯನ್ನು ತಯಾರಿಸಿರುವ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದರು.

ಬಿಳಕಿ ಹಿರೇಮಠದ ಶ್ರೀ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಶಿಲಾಮಠದ ಶ್ರೀ ಅಭಿನವಸಿದ್ದಲಿಂಗಶಿವಾಚಾರ್ಯಮಹಾಸ್ವಾಮಿಗಳು ಹಾಜರಿದ್ದರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ತು ಸದಸ್ಯ ಡಾ.ಧನಂಜಯ ಸರ್ಜಿ, ವಲಯ ಅರಣ್ಯಾಧಿಕಾರಿ ಶ್ವೇತ ವಿಶ್ವನಾಥ್, ಸಂಸ್ಥೆಯ ಪ್ರಮುಖರಾದ ಪ್ರೀಯಾ, ಅರುಣ್, ಅನುಷ್ಕಾ, ರೋಹನ್, ಎರಿಕಾ, ಶುಭಂ, ಶ್ರೇಯಾ, ರಾಗಿಣಿ, ಗ್ರಾಮಸ್ಥರು ಮಠದ ಭಕ್ತರು ಹಾಜರಿದ್ದರು.

ಚನ್ನಗಿರಿ ತಾಲೂಕಿನ ತಾವರೆಕೆರೆ ಶಿಲಾಮಠದಲ್ಲಿ ರೋಬೋಟ್ ಆನೆಯನ್ನು ಗಣ್ಯರು ಉದ್ಘಾಟಿಸಿದರು.

ಉಮಾಮಹೇಶ್ವರನ ಬೆಡಗು-ಬಿನ್ನಾಣ ಕಂಡು ಭಕ್ತರು ಬೆರಗು

ಅಲಂಕೃತ ರೋಬೋಟ್ ಆನೆಯನ್ನು ಗ್ರಾಮದ ಪ್ರಮುಖ ರಸ್ತೆಗಳಲ್ಲಿ ವಿವಿಧ ಜಾನಪದ ಕಲಾಮೇಳದೊಂದಿಗೆ ಮಠದ ಶ್ರೀಗಳು, ಅತಿಥಿ ಗಣ್ಯರೊಂದಿಗೆ ಭಕ್ತರ ಜೊತೆಯಲ್ಲಿ ಮೆರವಣಿಗೆ ನಡೆಸಲಾಯಿತು. ರೋಬೋಟ್ ಆನೆ ನೈಜ ಆನೆಯಂತೆಯೇ ಕಿವಿಯನ್ನು ಆಡಿಸುತ್ತಾ, ಕಣ್ಣುಗಳನ್ನು ಪಿಳಕಿಸುತ್ತಾ, ಸೊಂಡಿಲನ್ನು ಎತ್ತುವುದು, ಇಳಿಸುವುದನ್ನು ಮಾಡುತ್ತದೆ. ಮೆರವಣಿಗೆಯಲ್ಲಿಸಾಗಿಬರುವಾಗಗ್ರಾಮದ ಜನರು ರೋಬೋಟ್ ಆನೆಯ ಚಲನ-ವಲನಗಳನ್ನು ಕಂಡು ಬೆರಗಾದರು. ಈ ರೋಬೋಟ್ ಆನೆಯನ್ನು ನೋಡಲು ತಾವರೆಕೆರೆ ಗ್ರಾಮದ ಜನರು ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಜನರು ಬಂದು ವೀಕ್ಷಣೆ ಮಾಡಿ ಸಂತಸಪಟ್ಟರು.

ಕೈಲಾಸ ಸಮಾರಾಧನೆ

ಶ್ರೀ ಹೆಚ್. ಕರಿಯಪ್ಪ (ಬಂಡೇರ)
ನಿವೃತ್ತ ಇಂಜಿನಿಯರ್, ಹಿರೇಹಾಲಿವಾಣ
ಜನನ: 29-08-1945 ಮರಣ: 16-02-2025

ದಾವಣಗೆರೆ ಜಿ. ಹರಿಹರ ತಾ. ಹಿರೇಹಾಲಿವಾಣ ಗ್ರಾಮದ ವಾಸಿ ಶ್ರೀಮತಿ ತೀರ್ಥಮ್ಮ ಕೋಂ ಹೆಚ್. ಕರಿಯಪ್ಪ ಇವರು ಮಾಡುವ ವಿಜ್ಞಾಪನೆಗಳು.
ದಿನಾಂಕ: 16-02-2025ರ ಭಾನುವಾರ ಮಧ್ಯಾಹ್ನ 12.05ಕ್ಕೆ ಹೆಚ್.ಕರಿಯಪ್ಪ (ಬಂಡೇರ) ದೈವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ ಕೈಲಾಸ ಸಮಾರಾಧನೆಯನ್ನು ದಿನಾಂಕ: 24-02-2025ನೇ ಸೋಮವಾರ ಬೆಳಗ್ಗೆ 10-55ರಿಂದ ಮೃತರ ಸ್ವಗೃಹ ಹರಿಹರ ತಾ. ಹಿರೇಹಾಲಿವಾಣ ಗ್ರಾಮದಲ್ಲಿ ನೆರವೇರಿಸಲು ಗುರುಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನತಿ.

ಇಂತಿ ದುಃಖ ತಪ್ತರು
ಶ್ರೀಮತಿ ತೀರ್ಥಮ್ಮ ಕೋಂ ಹೆಚ್.ಕರಿಯಪ್ಪ ಮತ್ತು ಮಕ್ಕಳು, ಮೊಮ್ಮಕ್ಕಳು ಸೊಸೆಯಂದಿರು ಮತ್ತು ಬಂಡೇರ, ಬಡಪ್ಪರ ವಂಶಸ್ಥರು ಹಾಗೂ ಸತೀಶ್ ಸಿಆರ್‌ಪಿ ಬಂಧು ಮಿತ್ರರು, ಗ್ರಾಮಸ್ಥರು ಹಿರೇಹಾಲಿವಾಣ.

ಅಸ್ವಸ್ಥ ಮಹಿಳೆಗೆ ಚಿಕಿತ್ಸೆ ಕೊಡಿಸಿದ ಪತ್ರಕರ್ತರು

• **ಕನ್ನಡಪ್ರಭ ವಾರ್ತೆ** ಹರಿಹರ

ಕಳೆದೆರಡು ದಿನಗಳಿಂದ ರಸ್ತೆಯಲ್ಲಿ ಬಿದ್ದು, ಆಹಾರ ನೀರು ಇಲ್ಲದೇ, ಬಿಸಿಲಿನ ಬೇಗೆಯಲ್ಲಿ ಅಸ್ವಸ್ಥವಾಗಿ ನರಳಾಡುತ್ತಿದ್ದ ಅನಾಥ ಮಹಿಳೆಯನ್ನು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸುವ ಮೂಲಕ ಹರಿಹರ ಪತ್ರಕರ್ತರು ಮಾನವೀಯತೆ ಮೆರೆದರು.

ನಗರದ ಶ್ರೀ ಕಸಬಾ ಗ್ರಾಮ ದೇವತೆ ದೇವಸ್ಥಾನಹಿಂಭಾಗದವಾಣಿಜ್ಯಮಳಿಗೆ ಆವರಣದಲ್ಲಿ24 ತಾಸುಗಳಿಂದ ಅನಾಥೆ ಆಹಾರ ಮತ್ತು ನೀರಿಲ್ಲದೇ ಅಸ್ವಸ್ಥಳಾಗಿ, ನರಳಾಡುತ್ತಿದ್ದಳು. ಈ ಬಗ್ಗೆ ಪತ್ರಕರ್ತ ಜಿ.ಕೆ.ಪಂಚಾಕ್ಷರಿ ಪತ್ರಕರ್ತ ಮಿತ್ರರಿಗೆ ಮಾಹಿತಿ ನೀಡಿದರು. ತಕ್ಷಣ ಆಗಮಿಸಿದ ಯಮನೂರ್, ಸಾಬ್ಜನ್‌ಸಾಬ್ ಹಾಗೂ ಸ್ಥಳೀಯರು ಆ್ಯಂಬುಲೆನ್ಸ್‌ಗೆ ಫೋನಾಯಿಸಿದ್ದಾರೆ. ಆ್ಯಂಬುಲೆನ್ಸ್ ಮೂಲಕ ಅಸ್ವಸ್ಥೆಯನ್ನು ತುರ್ತು ನಿಗಾ ಘಟಕಕ್ಕೆ ದಾಖಲು ಮಾಡಿಸಿ, ಚಿಕಿತ್ಸೆ ದೊರೆಯಲು ನೆರವಾದರು. ಪತ್ರಕರ್ತರು ಹಾಗೂ ಆ್ಯಂಬ್ಯುಲೆನ್ಸ್ ಡ್ರೈವರ್ ನಾಗರಾಜ್ ಕಂಚಿಕೇರಿ ಮತ್ತು ಮುಕ್ರಂಸಾಬ್ ಸೇರಿದಂತೆ ಇತರರ ಸ್ಪಂದನೆಗೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಅಸ್ವಸ್ಥ ಮಹಿಳೆಯ ಹೆಸರು, ವಿಳಾಸ ಮಾಹಿತಿಗಳು ತಿಳಿದುಬಂದಿಲ್ಲ. ಸ್ಥಳದಲ್ಲಿದ್ದ ನಾಗರೀಕರು ಹೇಳುವಂತೆ, ಮಹಿಳೆಯ ಪೋಷಕರೇ ಆಕೆಯನ್ನು ರಸ್ತೆಯಲ್ಲಿ ಬಿಟ್ಟು ಹೋಗಿದ್ದಾರೆ. ತಕ್ಷಣ ಪೊಲೀಸರು ಪೋಷಕರನ್ನು ಪತ್ತೆ ಹಚ್ಚಿ, ಅವರಿಗೆ ಸರಿಯಾಗಿ ಬುದ್ಧಿ ಹೇಳಬೇಕು. ಮಹಿಳೆಯನ್ನು ಅವರ ಕುಟುಂಬದವರಿಗೆ ತಲುಪಿಸಬೇಕು ಎಂದರು.

ಹರಿಹರದ ಶ್ರೀ ಕಸಬಾ ಗ್ರಾಮ ದೇವತೆ ದೇವಸ್ಥಾನ ಹಿಂಭಾಗದ ಆವರಣದಲ್ಲಿ 24 ತಾಸುಗಳಿಂದ ನಿತ್ರಾಣಳಾಗಿದ್ದ ಮಹಿಳೆಗೆ ಪತ್ರಕರ್ತರು, ಆ್ಯಂಬುಲೆನ್ಸ್ ಮೂಲಕ ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಿ, ಚಿಕಿತ್ಸೆ ಕೊಡಿಸುವಲ್ಲಿ ನೆರವಾದರು.

ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್
(ಒಂದು ಷೆಡ್ಯೂಲ್ ವಾಣಿಜ್ಯ ಬ್ಯಾಂಕ್)

ನೋಂದಾಯಿತ ಕಛೇರಿ : ದಿ ಫೇರ್‌ವೇ, ನೆಲ ಮತ್ತು ಮೊದಲನೇ ಮಹಡಿ, ಸರ್ವೆ ಸಂ. 10/1, 11/2 ಮತ್ತು 12/2ಬಿ, ದೊಮ್ಮಲೂರು ಪಕ್ಕ, ಕೋರಮಂಗಲ ಒಳ ವರ್ತುಲ ರಸ್ತೆ, ಇಜಿಎಲ್ ಬ್ಯುಸಿನೆಸ್ ಪಾರ್ಕ್ ನಂತರ, ಚಲ್ಲಘಟ್ಟ, ಬೆಂಗಳೂರು-560071.

ಇ-ಹರಾಜು ಸೂಚನೆ

2002ರ ಭದ್ರತಾ ಹಿತಾಸಕ್ತಿ ನಿಯಮಗಳ ಪ್ರಾವಿಸೋ ರೂಲ್ 8(6) ಮತ್ತು 9 ರೊಂದಿಗೆ ಓದಿಕೊಳ್ಳಬೇಕಾದ ಸೆಕ್ಯುರೈಟೆಜೇಷನ್ ಅಂಡ್ ರೀಕನ್ಸ್ಟ್ರಕ್ಷನ್ ಆಫ್ ಫೈನಾನ್ಷಿಯಲ್ ಅಸೆಟ್ಸ್ ಅಂಡ್ ಎನ್ ಫೋರ್ಸ್‌ಮೆಂಟ್ ಆಫ್ ಸೆಕ್ಯುರಿಟಿ ಇಂಟರೆಸ್ಟ್ (ಸರ್ಫೇಸಿ ಕಾಯಿದೆ), 2002 ರಡಿ ಆಸ್ತಿಗಳ ಇ-ಹರಾಜು ಮಾರಾಟಕ್ಕಾಗಿ ಸಾರ್ವಜನಿಕ ಸೂಚನೆ

ಆದಾಗ್ಯೂ, ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್‌ನ ಅಧಿಕೃತ ಅಧಿಕಾರಿಯಾಗಿ ಸರ್ಫೇಸಿ ಕಾಯಿದೆಯ ಕಲಂ 13(4)ರಡಿ ಕೆಳಕಂಡ ಆಸ್ತಿಗಳನ್ನು ಸ್ವಾಧೀನಕ್ಕೆ ಪಡೆದುಕೊಂಡಿರುತ್ತಾರೆ. ಸಾಲಗಾರರಿಗೆ ನಿರ್ದಿಷ್ಟವಾಗಿ ಮತ್ತು ಸಾರ್ವಜನಿಕರಿಗೆ ವಿಸ್ತಾರವಾಗಿ ಮಾಹಿತಿ ನೀಡುವುದೇನೆಂದರೆ ಸಾಲ ಪಡೆಯಲು ಸಾಲಗಾರರು ಅಡಮಾನ ಮಾಡಿರುವ ಆಸ್ತಿಗಳನ್ನು ಬ್ಯಾಂಕಿಗೆ ಬಾಕಿಯಾಗಿರುವ ಸಾಲಗಳ ವಸೂಲಾತಿಗಾಗಿ ''ಎಲ್ಲಿ ಹೇಗಿದೆಯೋ ಹಾಗೆಯೇ'' ಹಾಗೂ ''ಎಲ್ಲಿ ಏನಿದೆಯೋ ಹಾಗೆಯೇ'' ಆಧಾರದಲ್ಲಿ ಆನ್‌ಲೈನ್ ಹರಾಜು (ಇ-ಹರಾಜು) ಮೂಲಕ ಸರ್ಫೇಸಿ ಕಾಯಿದೆಯಂತೆ ಇ-ಹರಾಜು ಮಾರಾಟ ಮಾಡಲಾಗುತ್ತದೆ.

ಕ್ರ. ಸಂ.	ಸಾಲದ ಖಾತಾ ಸಂಖ್ಯೆ	ಮೂಲ ಸಾಲಗಾರ/ ಸಹ-ಸಾಲಗಾರ/ ಜಾಮೀನುದಾರ/ಹೆಸರು	13-2 ನೋಟೀಸ್ ದಿನಾಂಕ	ಸ್ವಾಧೀನತೆಯ ದಿನಾಂಕ	ಪ್ರಸ್ತುತ ಬಾಕಿ ಮೊತ್ತ ದಿನಾಂಕ 20.02.2025 ರಂದು ಇದ್ದಂತೆ	ಆಸ್ತಿಯ ಪರಿಶೀಲನೆಯ ದಿನಾಂಕ ಮತ್ತು ಸಮಯ	ಮೀಸಲು ಬೆಲೆ ಐಎನ್‌ಆರ್	ಅರ್ನೆಸ್ಟ್ ಮನಿ ಡಿಪಾಸಿಟ್ (ಇಎಂಡಿ) ಐಎನ್‌ಆರ್	ಇ-ಹರಾಜಿನ ದಿನಾಂಕ ಮತ್ತು ಸಮಯ	ಬಿಡ್ ಸಲ್ಲಿಸಲು ಸ್ಥಳ ಮತ್ತು ಕೊನೆಯ ದಿನಾಂಕ ಮತ್ತು ಸಮಯ
1	45439430000233 & 45439410000167	1) ಶ್ರೀ ಮೌನೇಶ್ವರ ಪಿಎಂ 2) ಶ್ರೀಮತಿ ಜಯಶೀಲ ಪಿಎಂ 3) ಶ್ರೀಮತಿ ಆಶಾ ಪಿಎಂ	24.04.2024	09.07.2024	ರೂ. 25,12,871/- (ಇಪ್ಪತ್ತೈ ಲಕ್ಷದ ಹನ್ನೆರಡು ಸಾವಿರದ ಎಂಟುನೂರ ಎಪ್ಪತ್ತೊಂದು ರೂ. ಗಳು ಮಾತ್ರ)	07.03.2025 Time: 09:30 AM to 05:00 PM	ರೂ. 21,20,000/- (ಇಪ್ಪತ್ತೊಂದು ಲಕ್ಷದ ಇಪ್ಪತ್ತು ಸಾವಿರ ರೂ. ಗಳು ಮಾತ್ರ)	ರೂ. 2,12,000/- (ಎರಡು ಲಕ್ಷದ ಹನ್ನೆರಡು ಸಾವಿರ ರೂ. ಗಳು ಮಾತ್ರ)	14.03.2025 @ 02:00 PM	13.03.2025, ಸಂಜೆ 05.00 ಗಂಟೆಯ ಒಳಗೆ ಜನ ಸ್ಮಾಲ್ ಫೈನಾನ್ ಬ್ಯಾಂಕ್ ಲಿ., ಮುಖ್ಯ ಕಛೇರಿ: ದಿ ಫೇರ್‌ವೇ, ನೆಲಮಹಡಿ ಮತ್ತು ಮೊದನೇ ಮಹಡಿ, ಸರ್ವೆ ಸಂ. 10/1, 11/2 ಮತ್ತು 12/2ಬಿ ದೊಮ್ಮಲೂರು ಪಕ್ಕ, ಕೋರಮಂಗಲ ಇನ್ನರ್ ರಿಂಗ್ ರಸ್ತೆ, ಇಜಿಎಲ್ ಬಿಸಿನೆಸ್ ಪಾರ್ಕ್ ನಂತರ, ಚಲ್ಲಘಟ್ಟ, ಬೆಂಗಳೂರು- 560071.
	ಭದ್ರತಾ ಆಸ್ತಿಯ ವಿವರಣೆ : ಸಕಲ ಸಮಸ್ತವೂ ಸೇರಿದ ಆಸ್ತಿಯ ನಿವೇಶನ ಸಂ. 42, ಆಸ್ತಿ ಸಂ. 5211, ಹಳೇ ಅಸೆಸ್‌ಮೆಂಟ್ ಸಂ. 5844/5771/5211, ಪ್ರಸ್ತುತ ಅಸೆಸ್‌ಮೆಂಟ್ ಸಂ. 5844/5771/5211, ಪಿಐಡಿ ಸಂ. 22-119-ಟಿ08, ಅಳತೆ: 9.144018 X 13.716027 ಮೀಟರ್ ಅಂದರೆ 125.41905 ಚದರ ಮೀಟರ್, ಸ್ಥಳ: ಟಿ08, ಉತ್ತರ ಭಾಗದ ಬ್ಲಾಕ್ ಸಂ. 21, 6ನೇ ವಾರ್ಡ್, 3ನೇ ಕ್ರಾಸ್ ರಸ್ತೆ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ. ಇದರ ಚಕ್ಕುಬಂದಿ: ಪೂರ್ವದ ಕಡೆಗೆ: ನಿವೇಶನ ಸಂ. 41, ಪಶ್ಚಿಮದ ಕಡೆಗೆ: ನಿವೇಶನ ಸಂ. 43, ಉತ್ತರದ ಕಡೆಗೆ: ನಿವೇಶನ ಸಂ. 64, ಮತ್ತು ದಕ್ಷಿಣದ ಕಡೆಗೆ: ಪಟ್ಟಣ ಪಂಚಾಯತ್ ರಸ್ತೆ.									

ಆಸ್ತಿಗಳನ್ನು ''ಎಲ್ಲಿ ಹೇಗಿದೆಯೋ ಹಾಗೆಯೇ'' ಮತ್ತು ''ಎಲ್ಲಿ ಏನಿದೆಯೋ ಹಾಗೆಯೇ'' ಆಧಾರದಲ್ಲಿ ಮಾರಾಟ ಮಾಡಲಾಗುವುದು. ಇ-ಹರಾಜನ್ನು 'ಆನ್ ಲೈನ್' ಮೂಲಕ ನಡೆಸಲಾಗುತ್ತದೆ. ಹರಾಜನ್ನು ಬ್ಯಾಂಕ್ ಅಂಗೀಕೃತ ಸೇವಾ ಒದಗಿಸುವವರಾದ ಮೆ॥-4 ಕ್ಲೋಸರ್ ಮೂಲಕ https://bankauctions.in & www.foreclosureindia.com. ಎಂಬುವ ವೆಬ್‌ಪೋರ್ಟಲ್‌ನಲ್ಲಿ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮತ್ತು ವಿವರಗಳಿಗಾಗಿ, ನೆರವಿಗಾಗಿ, ಕ್ರಮಗಳ ತಿಳಿದುಕೊಳ್ಳುವುದಕ್ಕಾಗಿ ಮತ್ತು ಇ-ಹರಾಜು ಆನ್‌ಲೈನ್ ತರಬೇತಿ ಪಡೆದುಕೊಳ್ಳುವುದಕ್ಕಾಗಿ ಭಾವಿ ಬಿಡ್‌ದಾರರು ಮೆ॥-4 ಕ್ಲೋಸರ್ ಸಂಪರ್ಕ ಶ್ರೀ ಎಂ ಶ್ರೀನಿವಾಸಲು, ಸಂಪರ್ಕ ಸಂ. 8142000809. Email id: info@bankauctions.in / srinivas@bankauctions.in. ಇವರನ್ನು ಸಂಪರ್ಕಿಸುವುದು.

ಷರತ್ತು ಮತ್ತು ನಿಬಂಧನೆಗಳ ಹೆಚ್ಚಿನ ವಿವರಗಳಿಗಾಗಿ ಹಾಗೂ ಇ-ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸುವುದಕ್ಕಾಗಿ ಹಾಗೂ ಆಸ್ತಿ ಸಂಬಂಧಿತ ಯಾವುದೇ ವಿವರಗಳಿಗಾಗಿ ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನ ಅಧಿಕೃತ ಅಧಿಕಾರಿಗಳಾದ ಶ್ರೀ ರಂಜನ್ ನಾಯಕ್, (ಮೊ.ಸಂ. 6362951653), ಶ್ರೀ ಉಮೇಶ್ (ಮೊಬೈಲ್ ಸಂ. 8050149617) ಮತ್ತು ಶ್ರೀಮತಿ ಸಾಯಿದಾ (ಮೊಬೈಲ್ ಸಂ. 7400445147) ಅನ್ನು ಸಂಪರ್ಕಿಸುವುದು. ಅಧಿಕೃತ ಅಧಿಕಾರಿಗಳ ಉತ್ತಮ ತಿಳುವಳಿಕೆ ಮತ್ತು ಮಾಹಿತಿಗೆ ಬಂದಂತೆ ಆಸ್ತಿಗಳ ಮೇಲೆ ಯಾವುದೇ ಋಣಭಾದ್ಯತೆಗಳು ಇಲ್ಲ. ಆದಾಗ್ಯೂ, ಇಚ್ಛೆಯುಳ್ಳ ಬಿಡ್‌ದಾರರು ಬಿಡ್ ಸಲ್ಲಿಸುವ ಮುಂಚೆ ಆಸ್ತಿಯ ಋಣಭಾದ್ಯತೆಗಳು ಹಾಗೂ ಸ್ವಾಮ್ಯ ಮುಂತಾದವುಗಳ ಬಗ್ಗೆ ಅವರದೇ ಸ್ವತಂತ್ರ ವಿಚಾರಣೆಗಳನ್ನು ನಡೆಸಿ ತಿಳಿದುಕೊಳ್ಳಬಹುದಾಗಿದೆ. ಷರತ್ತಿನ ಬಿಡ್‌ಗಳನ್ನು ಒಪ್ಪಿಕೊಳ್ಳುವುದಿಲ್ಲ. ಮೇಲೆ ಹೆಸರಿಸಲಾದ. ಸಾಲಗಾರರು/ ಜಾಮೀನುದಾರರು/ ಅಡಮಾನದಾರರುಗಳಿಗೆ ಈ ಮೂಲಕ ಅಧಿಸೂಚಿಸುವುದೇನೆಂದರೆ ಮೇಲೆ ತಿಳಿಸಿದ ಬಾಕಿ ಮೊತ್ತ ಜೊತೆಗೆ ಅಪ್ ಟು ಡೇಟ್ ಬಡ್ಡಿ ಹಾಗೂ ಸಾದಿಲ್ವಾರು ವೆಚ್ಚಗಳನ್ನು ಹರಾಜಿನ ದಿನಾಂಕಕ್ಕೆ ಮುಂಚೆ ಪಾವತಿ ಮಾಡಬೇಕು. ವಿಫಲರಾದಲ್ಲಿ ಮೇಲಿನ ಆಸ್ತಿಯನ್ನು ಮಾರಾಟ ಮಾಡಿ ಸಾಲದ ಬಾಕಿಗಾಗಿ ಹೊಂದಿಸಿಕೊಳ್ಳಲಾಗುವುದು. ಇನ್ನೂ ಬಾಕಿ ಉಳಿದ ಪಕ್ಷದಲ್ಲಿ ಅದನ್ನು ಬಡ್ಡಿ ಮತ್ತು ವೆಚ್ಚಗಳೊಂದಿಗೆ ವಸೂಲು ಮಾಡಿಕೊಳ್ಳಲಾಗುವುದು.

ದಿನಾಂಕ: 24.02.2025, ಸ್ಥಳ: ದಾವಣಗೆರೆ — **ಸಹಿ/- ಅಧಿಕೃತ ಅಧಿಕಾರಿ, ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್**

ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ
ಭಾರತ ಸರ್ಕಾರ

"ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯು ಉತ್ತಮ ವಿಮಾ ಭದ್ರತೆಯನ್ನು ನೀಡಿ ಅನಿರೀಕ್ಷಿತ ಅಥವಾ ಹವಾಮಾನ ಪರಿಸ್ಥಿತಿಗಳಿಂದ ಉಂಟಾದ ನಷ್ಟಕ್ಕೆ ರೈತರಿಗೆ ಪರಿಹಾರವನ್ನು ಒದಗಿಸುತ್ತಿದೆ. ಕೋಟ್ಯಾಂತರ ರೈತರು ಇದರ ಪ್ರಯೋಜನವನ್ನು ಪಡೆದಿದ್ದಾರೆ. ಈ ಯೋಜನೆಯು ವಿಮಾ ಪರಿಹಾರ ಮೊತ್ತ ಪಾವತಿ ಮಾಡುವಲ್ಲಿ ಪಾರದರ್ಶಕತೆಯನ್ನು ಅನುಸರಿಸಿ ರೈತರಲ್ಲಿ ಹೊಸ ಆತ್ಮವಿಶ್ವಾಸ ಮೂಡಿಸಿದೆ."
- ನರೇಂದ್ರ ಮೋದಿ, ಪ್ರಧಾನ ಮಂತ್ರಿ

ಬೆಳೆಗೆ ಸಿಕ್ಕಿದೆ ಸುರಕ್ಷೆಯ ಕವಚ
ನನ್ನ ಪಾಲಿಸಿ ನನ್ನ ಕೈಯಲ್ಲಿ
ಬೆಳೆ ವಿಮೆ ಮಾಡಿಸಿಕೊಳ್ಳಿರಿ, ವಿಮಾ ಭದ್ರತೆ ಪಡೆಯಿರಿ

ಪ್ರಧಾನಮಂತ್ರಿ ಬೆಳೆ ವಿಮಾ ಯೋಜನೆಯ ಸಾಧನೆಗಳು
- 21.95 ಕೋಟಿ ರೈತ ಬಾಂಧವರಿಗೆ ಈ ವರೆಗೆ ಬೆಳೆ ವಿಮೆಯ ಪ್ರಯೋಜನ ದೊರೆತಿದೆ
- ₹1.72 ಲಕ್ಷ ಕೋಟಿ ಕ್ಲೇಮ್‌ಗಳ ಪಾವತಿಯನ್ನು ಕೃಷಿಕರಿಗೆ ಮಾಡಲಾಗಿದೆ
- 72.61 ಕೋಟಿಗಿಂತ ಹೆಚ್ಚು ಕೃಷಿಕರ ಅರ್ಜಿಯನ್ನು ಸ್ವೀಕರಿಸಲಾಗಿದೆ

ನಿಮ್ಮ ಗ್ರಾಮದಲ್ಲಿ ನಡೆಯಲಿರುವ ಶಿಬಿರದಲ್ಲಿ ಈ ವಿಷಯಗಳ ಬಗ್ಗೆ ಮಾಹಿತಿಯನ್ನು ಪಡೆಯಿರಿ.
- ವಿಮಾ ಪಾಲಿಸಿ, ಸರಕಾರಿ ನೀತಿಗಳು, ಭೂ ದಾಖಲೆಗಳು ಮತ್ತು ಹಕ್ಕುಗಳು ಹಾಗೂ ಕುಂದು ಕೊರತೆ ಪರಿಹಾರ
- ಕೃಷಿಕರ ತರಬೇತಿಗಾಗಿ ವಿಮಾ ಪಾಠಶಾಲೆ

ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆ

ವಿಮಾ ಭಾಗಿದಾರರು AIC, Bajaj Allianz, Chola MS, Future Generali, HDFC ERGO, ICICI Lombard, IFFCO-TOKIO, Kshema, Oriental Insurance, Reliance General Insurance, SBI General, TATA AIG, Universal Sompo General Insurance

ಯೋಜನೆಯ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿರಿ
ಸಾಮಾನ್ಯ ಸೇವಾ ಕೇಂದ್ರ/ ಗ್ರಾಮ ಒನ್ ಕೇಂದ್ರ | www.samrakshane.karnataka.gov.in | ಕಿಸಾನ್ ಕಾಲ್ ಸೆಂಟರ್ 1800-425-3553 | ಪೋಸ್ಟ್ ಆಫೀಸ್ | ಬ್ಯಾಂಕ್ ಶಾಖೆ | @PMFBY
ಯೋಜನೆಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ QR ಕೋಡ್ ಸ್ಕ್ಯಾನ್ ಮಾಡಿ